ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ	72
ಸದಸ್ಯರ ಹೆಸರು	ಶ್ರೀಮತಿ.ಎಸ್.ವೀಣಾ ಅಚ್ಚಯ್ಯ
ಉತ್ತರಿಸುವ ದಿನಾಂಕ	15.07.2019
ಉತ್ತರಿಸುವ ಸಚಿವರು	ಕೃಷಿ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸಂಭವಿಸಿದ ಪ್ರಕೃತಿ ವಿಕೋಪದಿಂದ ಬೆಳೆ ಬೆಳೆದುಕೊಂಡು ರೈತರು ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?	ಹೌದು
ಆ)	ಈ ಆರ್ಥಿಕ ಸಂಕಷ್ಟದಿಂದ ಪ್ರಸಕ್ತ ಸಾಲಿನಲ್ಲಿ ರೈತರು ಕೃಷಿ ಚಟುವಟಿಕೆ ಕೈಗೊಳ್ಳಲು ಕಷ್ಟವಾಗಿರುವುದರಿಂದ ಅವರ ನೆರವಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು.	2018-19ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಅತಿವೃಷ್ಟಿಯಿಂದಾಗಿ ಹೂಳು ತುಂಬಿ ಹಾಗೂ ಅತಿವೃಷ್ಟಿಯಿಂದ ಬೆಳೆಗಳು ಹಾನಿಗೊಳಗಾಗಿದ್ದು ವಿವರಗಳನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿರುವ ದಾಖಲೆಗಳ ಆಧಾರದ ಮೇರೆಗೆ ಇದುವರೆಗೆ ಒಟ್ಟಾರೆ ರೂ.44.40 ಕೋಟಿಗಳನ್ನು ಪರಿಹಾರವಾಗಿ ವಿತರಿಸಲಾಗಿದೆ.
ಇ)	ಪ್ರಸಕ್ತ ಸಾಲಿನಲ್ಲಿ ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ಸರ್ಕಾರ ರೈತರಿಗೆ ನೀಡಿರುವ ಸೌಲಭ್ಯಗಳೇನು. (ಸಂಪೂರ್ಣ ವಿವರ ನೀಡುವುದು)	ಪ್ರಸಕ್ತ ಸಾಲಿನಲ್ಲಿ ಕೃಷಿ ಚಟುವಟಿಕೆಗಳಿಗೆ ಪೂರಕವಾಗುವಂತೆ ಸರ್ಕಾರದ ವತಿಯಿಂದ ರೈತರಿಗೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳ ಪೂರೈಕೆ, ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡಗಳ ನಿರ್ಮಾಣಕ್ಕೆ ಸಹಾಯಧನ, ಕೃಷಿ ಯಾಂತ್ರೀಕರಣ ಯೋಜನೆ ಯಡಿಯಲ್ಲಿ ವಿವಿಧ ಕೃಷಿ ಯಂತ್ರೋಪಕರಣಗಳ ಖರೀದಿಗೆ ಸಹಾಯಧನ, ಸೂಕ್ಷ್ಮ ನೀರಾವರಿ ಯೋಜನೆಯಡಿ ತುಂತುರು ಹಾಗು ಹನಿ ನೀರಾವರಿ ಘಟಕಗಳಿಗೆ ಸಹಾಯಧನ, ರಿಯಾಯಿತಿ ದರದಲ್ಲಿ ಸಸ್ಯ ಸಂರಕ್ಷಣಾ ಔಷಧಿಗಳ ವಿತರಣೆ, ಮಣ್ಣಿನ ಸತ್ವ ಹೆಚ್ಚಿಸುವಿಕೆ ಯೋಜನೆಯಡಿ ಮಣ್ಣು ಸುಧಾರಕಗಳ ವಿತರಣೆ, ಉಚಿತ ಮಣ್ಣು ಮಾದರಿಗಳ ವಿಶ್ಲೇಷಣೆ, ಸಾವಯವ ಗೊಬ್ಬರಗಳ ವಿತರಣೆ, ಕೃಷಿ ಉತ್ಪನ್ನಗಳ ಸಂಸ್ಕರಣೆ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳಿಗೆ ಪ್ರೋತ್ಸಾಹಧನ, ಕೇಂದ್ರ ಪುರಸ್ಕೃತ ಯೋಜನೆಗಳಡಿಯಲ್ಲಿ ಭತ್ತ, ಎಣ್ಣೆ ಕಾಳು ಹಾಗೂ

		ದ್ವಿದಳ ಧಾನ್ಯ ಬೆಳೆಗಳ ಉತ್ಪಾದನೆಗೆ ಪ್ರೋತ್ಸಾಹ ನೀಡುವಲ್ಲಿ ರಿಯಾಯಿತಿ ದರದಲ್ಲಿ ಪ್ರಾತ್ಯಕ್ಷಿಕೆಗಳ ಏರ್ಪಡಿಸುವಿಕೆ, ಉಪಕರಣಗಳ ವಿತರಣೆ, ತರಬೇತಿ ಕಾರ್ಯಕ್ರಮ, ಬೆಳೆ ವಿಮಾ ಯೋಜನೆಯಡಿಯಲ್ಲಿ ಬೆಳೆ ನಷ್ಟ ಪರಿಹಾರ ನೀಡುವಲ್ಲಿ ರೈತರ ನೊಂದಣಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಎಲ್ಲಾ ಕಾರ್ಯಕ್ರಮಗಳ ಬಗ್ಗೆ ರೈತರಲ್ಲಿ ಅರಿವು ಮೂಡಿಸುವಲ್ಲಿ ಕೃಷಿ ಅಭಿಯಾನ ಹಾಗೂ ಇತರೆ ವಿಸ್ತರಣಾ ಪದ್ಧತಿಗಳ ಮೂಲಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಸಂಖ್ಯೆ:E-AGRI-AML/30/2019

(ಎನ್.ಹೆಚ್.ಶಿವಶಂಕರರೆಡ್ಡಿ)
ಮಾನ್ಯ ಕೃಷಿ ಸಚಿವರು.